ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

## ರಾಜ್ಯ ಚುನಾವಣಾ ಆಯೋಗದ ನಡವಳಿ.

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶದ ಅನುಬಂಧದಲ್ಲಿರುವ 63 (8 ನಗರಸಭೆಗಳು, 33 ಪುರಸಭೆಗಳು ಹಾಗೂ 22 ಪಟ್ಟಣ ಪಂಚಾಯಿತಿಗಳು) ನಗರ ಸ್ಥಳೀಯ ಸಂಸ್ಥೆಗಳಿಗೆ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019, ದಿನಾಂಕ: 02-05-2019 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆಯನ್ನು ನಡೆಸಲು ಆದೇಶಿಸಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ಪುರಸಭೆಗೆ ಸಂಬಂಧಪಟ್ಟಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ **ರಿಟ್ ಅರ್ಜಿ ಸಂಖ್ಯೆ:21239/2019** ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.05.2019ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ನೆಲಮಂಗಲ ಪುರಸಭೆಗೆ ಚುನಾವಣಾ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಿಗೆ ಆದೇಶಿಸಲಾಗಿದೆ. ಮಾನ್ಯ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019,**
**ಬೆಂಗಳೂರು, ದಿನಾಂಕ: 09-05-2019**

ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ಪುರಸಭೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ಪ್ರಕರಣದ ದಿನಾಂಕ.08.05.2019ರ ಆದೇಶದಲ್ಲಿ ನೆಲಮಂಗಲ ಪುರಸಭೆಗೆ ಚುನಾವಣೆ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಿಗೆ ಆದೇಶಿಸಿರುವುದರಿಂದ, ನೆಲಮಂಗಲ ಪುರಸಭೆಗೆ ಇಂದಿನಿಂದ ಪ್ರಾರಂಭವಾಗಬೇಕಿದ್ದ ಚುನಾವಣಾ ಪ್ರಕ್ರಿಯೆನ್ನು ತಡೆಹಿಡಿಯುವಂತೆ ಆದೇಶಿಸಿದೆ.

ಆದೇಶಾನುಸಾರ

(ನಾಗರಾಜು. ಎನ್.ಆರ್.)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
09/05/19

ಇವರಿಗೆ:

1. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
2. ಚುನಾವಣಾಧಿಕಾರಿಗಳು, ನೆಲಮಂಗಲ ಪುರಸಭೆ ಇವರಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು (ಗ್ರಾ)ಜಿಲ್ಲೆ ಇವರ ಮುಖಾಂತರ

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು-560 001.
2. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು-560 001.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.

ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

## ರಾಜ್ಯ ಚುನಾವಣಾ ಆಯೋಗದ ನಡವಳಿ.

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶದ ಅನುಬಂಧದಲ್ಲಿರುವ 63 (8 ನಗರಸಭೆಗಳು, 33 ಪುರಸಭೆಗಳು ಹಾಗೂ 22 ಪಟ್ಟಣ ಪಂಚಾಯಿತಿಗಳು) ನಗರ ಸ್ಥಳೀಯ ಸಂಸ್ಥೆಗಳಿಗೆ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019, ದಿನಾಂಕ: 02-05-2019 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರ ಪತ್ರ ಸಂಖ್ಯೆ ನಂ.ಚು (4) ಸಿಆರ್.19/2018-19 ದಿನಾಂಕ.09-05-2019ರಲ್ಲಿ ಶಿವಮೊಗ್ಗ ಜಿಲ್ಲೆ, ಸೊರಬ ಪಟ್ಟಣ ಪಂಚಾಯಿತಿ ಸಂಬಂಧಪಟ್ಟಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ **ರಿಟ್ ಅರ್ಜಿ ಸಂಖ್ಯೆ:21241/2019** ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.05.2019ರಂದು ನೀಡಿರುವ ಮಧ್ಯಂತರ ಆದೇಶದ ಪ್ರತಿಯನ್ನು ಲಗತ್ತಿಸಿ, ಈ ಬಗ್ಗೆ ಆಯೋಗದ ಮಾರ್ಗದರ್ಶನ ಕೋರಿರುತ್ತಾರೆ. ಮಾನ್ಯ ನ್ಯಾಯಾಲಯದ ಆದೇಶದಲ್ಲಿ ಸೊರಬ ಪಟ್ಟಣ ಪಂಚಾಯಿತಿ ಚುನಾವಣಾ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಶಿವಮೊಗ್ಗ ಜಿಲ್ಲಾಧಿಕಾರಿಗಳಿಗೆ ಆದೇಶಿಸಲಾಗಿದೆ. ಮಾನ್ಯ ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**<u>ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019,</u>**
**<u>ಬೆಂಗಳೂರು, ದಿನಾಂಕ: 09-05-2019</u>**

ಶಿವಮೊಗ್ಗ ಜಿಲ್ಲೆ ಸೊರಬ ಪಟ್ಟಣ ಪಂಚಾಯಿತಿ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ಪ್ರಕರಣದ ದಿನಾಂಕ.08.05.2019ರ ಆದೇಶದಲ್ಲಿ ಸೊರಬ ಪಟ್ಟಣ ಪಂಚಾಯಿತಿಗೆ ಚುನಾವಣೆ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಶಿವಮೊಗ್ಗ ಜಿಲ್ಲೆ ಜಿಲ್ಲಾಧಿಕಾರಿಗಳಿಗೆ ಆದೇಶಿಸಿರುವುದರಿಂದ, ಸೊರಬ ಪಟ್ಟಣ ಪಂಚಾಯಿತಿಗೆ ಇಂದಿನಿಂದ ಪ್ರಾರಂಭವಾಗಿರುವ ಚುನಾವಣಾ ಪ್ರಕ್ರಿಯೆಯನ್ನು ತಡೆಹಿಡಿಯುವಂತೆ ಆದೇಶಿಸಿದೆ.

ಆದೇಶಾನುಸಾರ

(ನಾಗರಾಜು. ಎನ್.ಆರ್.)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
09/05/19

ಇವರಿಗೆ:

1. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರಿಗೆ ಕಳುಹಿಸಿ, ಮಾನ್ಯ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಸೊರಬ ಪಟ್ಟನ ಪಂಚಾಯಿತಿಗೆ ಸಂಬಂಧಿಸಿದಂತೆ ಹೊರಡಿಸಿರುವ ಚುನಾವಣಾ ಅಧಿಸೂಚನೆಯನ್ನು ತಡೆಹಿಡಿದಿರುವುದಾಗಿ ಪತ್ರಿಕಾ ಪ್ರಕಟಣೆ ನೀಡುವಂತೆ ಸೂಚಿಸಿದೆ.
2. ಚುನಾವಣಾಧಿಕಾರಿಗಳು, ಸೊರಬ ಪಟ್ಟಣ ಪಂಚಾಯಿತಿ ಇವರಿಗೆ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರ ಮುಖಾಂತರ ಕಳುಹಿಸಿ, ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಚುನಾವಣಾ

-2.